ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1189
ಸದಸ್ಯರ ಹೆಸರು : ಶ್ರೀ. ಎಸ್.ಎಲ್.ಧರ್ಮೇಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 20.12.2018
ಉತ್ತರಿಸುವ ಸಚಿವರು : ಮಾನ್ಯ ಉನ್ನತ ಶಿಕ್ಷಣ ಸಚಿವರು

ಪ್ರಶ್ನೆ	ಉತ್ತರ
ಚಿಕ್ಕಮಗಳೂರು ಜಿಲ್ಲೆಗೆ ಇಂಜಿನಿಯರಿಂಗ್ ಕಾಲೇಜು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಹಾಗಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗಿದೆ; (ಪೂರ್ಣ ಮಾಹಿತಿ ನೀಡುವುದು)	ಸರ್ಕಾರದ ಆದೇಶ ಸಂಖ್ಯೆ: ಇಡಿ 73 ಹೆಚ್‌ಪಿಟಿ 2012, ದಿನಾಂಕ: 16-11-2012 ರಲ್ಲಿ ಹೊಸದಾಗಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಮಂಜೂರು ಮಾಡಿ ಆದೇಶಿಸಿದೆ.
ಸದರಿ ಇಂಜಿನಿಯರಿಂಗ್ ಕಾಲೇಜಿನ ಕಟ್ಟಡ ನಿರ್ಮಾಣ ಮಾಡಲು ಇದುವರೆವಿಗೂ ಬಿಡುಗಡೆಯಾದ ಅನುದಾನ ಎಷ್ಟು; ಬಿಡುಗಡೆಯಾಗದಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಸರ್ಕಾರ ಅನುದಾನವನ್ನು ಬಿಡುಗಡೆ ಮಾಡುವುದೇ; (ಮಾಹಿತಿ ನೀಡುವುದು)	2018-19 ನೇ ಸಾಲಿಗೆ ಲೆಕ್ಕಶೀರ್ಷಿಕೆ: 4202-02-104-1-03-386 ರಡಿ ರೂ.43.10ಕೋಟಿಗಳ ಕ್ರಿಯಾ ಯೋಜನೆಯಲ್ಲಿ ಅನುದಾನ ಹಂಚಿಕೆ ಮಾಡಿಕೊಂಡಿದ್ದು, ಮುಂದುವರಿದ ಕಾಮಗಾರಿಗಳಿಗೇ ಅನುದಾನದ ಕೊರತೆ ಇದೆ. ಪ್ರಸಕ್ತ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಿಕ್ಕಮಗಳೂರು ಸಂಸ್ಥೆಯ ಕಟ್ಟಡ ನಿರ್ಮಾಣ ಕಾಮಗಾರಿಗೆ ಕ್ರಿಯಾ ಯೋಜನೆಯಲ್ಲಿ ಅನುದಾನ ನಿಗದಿಯಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಟ್ಟಡ ನಿರ್ಮಾಣ ಕಾಮಗಾರಿಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ.
ಕಟ್ಟಡ ಕಾಮಗಾರಿ ಪ್ರಾರಂಭವಾಗಿದೆಯೇ; ಇದುವರೆಗಿನ ಕಟ್ಟಡದ ಭೌತಿಕ ಮತ್ತು ಆರ್ಥಿಕ ಸ್ಥಿತಿಗತಿಗಳೇನು; (ಪೂರ್ಣ ಮಾಹಿತಿ ನೀಡುವುದು)	ಇಲ್ಲ ಸರ್ಕಾರದ ಆದೇಶ ಸಂಖ್ಯೆ:ಇಡಿ 73 ಹೆಚ್‌ಪಿಟಿ 2012 ದಿನಾಂಕ:25-09-2014 ರನ್ವಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಿಕ್ಕಮಗಳೂರು ಸಂಸ್ಥೆಗೆ ನಿವೇಶನ ಒದಗಿಸಿ ಮುಖ್ಯ ಕಟ್ಟಡ ಮತ್ತು ಇತರೇ ಮೂಲಭೂತ ಸೌಕರ್ಯಗಳನ್ನು ಹಾಗೂ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಒದಗಿಸಲು ವಿ.ಟಿ.ಯುಗೆ ಹಸ್ತಾಂತರಿಸಲಾಗಿತ್ತು ಹಾಗೂ ಸದರಿ ಸಂಸ್ಥೆಯ ಕಟ್ಟಡ ಕಾಮಗಾರಿಯ ಶಂಕುಸ್ಥಾಪನೆಯನ್ನೂ ನೆರವೇರಿಸಲಾಗಿದೆ. ಆದರೆ, ವಿಶ್ವೇಶ್ವರಯ್ಯ ಟೆಕ್ನಾಲಜಿಕಲ್ ವಿಶ್ವವಿದ್ಯಾಲಯ (ವಿ.ಟಿ.ಯು) ಬೆಳಗಾವಿಯ ರೂ. 440.00 ಕೋಟಿಗಳನ್ನು ಆದಾಯ ತೆರಿಗೆ ಇಲಾಖೆಯು ತನ್ನ ವಶಕ್ಕೆ ಪಡೆದ ಕಾರಣ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಿರುವುದಿಲ್ಲ. ಆದಾಯ ತೆರಿಗೆ ಇಲಾಖೆ ತನ್ನ ವಶಕ್ಕೆ ಪಡೆದ ಹಣವನ್ನು ಹಿಂದಿರುಗಿಸಿದ ತಕ್ಷಣ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು..

(ಜಿ.ಟಿ.ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 193 ಹೆಚ್‌ಪಿಯು 2018